**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾಯವರ ನ್ಯಾಯಾಲಯ, ಹುಣಸೂರು.**

**ಸಿ.ಸಿ. 1350/2025**

**ಫಿರ್ಯಾದುದಾರರು** : ಸರಕಾರ (ಹುಣಸೂರು ಪಟ್ಟಣ ಪೊಲೀಸರಿಂದ)

**– ವಿರುದ್ಧ –**

**ಆರೋಪಿ** : ಏಜಾಜ್

**ಶ್ರೀಮತಿ ಅನಿತ, ಬಿ.ಎ.(ಲಾ), ಎಲ್.ಎಲ್.ಬಿ., ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ಹುಣಸೂರು ಆದ ನಾನು ಈ ಕೆಳಗೆ ಕಾಣಿಸಿರುವ**:

ಏಜಾಜ್, ಬಿನ್ ಲೇಟ್ ಅಬ್ದುಲ್ ರಶೀದ್,
65 ವರ್ಷ, ಕೂಲಿ, ವಾಸಃ ಶಬ್ಬೀರ್ ನಗರ,
ಹುಣಸೂರು ಪಟ್ಟಣ, ಮೈಸೂರು ಜಿಲ್ಲೆ

**ದೋಷಾರೋಪಣೆ**

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 05.11.2025 ರಂದು ಬೆಳಿಗ್ಗೆ 9.00 ಗಂಟೆ ಸಮಯದಲ್ಲಿ ಹುಣಸೂರು ಪಟ್ಟಣ ಪೋಲೀಸ್ ಠಾಣಾ ವ್ಯಾಪ್ತಿಯ ಶಬ್ಬೀರ್ ನಗರ ಮತ್ತು ಸಿದ್ಧನಕೊಪ್ಪಲು ಗ್ರಾಮದ ಮಧ್ಯದಲ್ಲಿ ಪಾರ್ವತಮ್ಮರವರ ತೋಟದ ಎದುರಿನ ಪೂರ್ವಕ್ಕೆ ಹಾದು ಹೋಗಿರುವ ರಸ್ತೆಯಲ್ಲಿ ಚಾಸಾ–1 ಆಯೂಬ್ ಖಾನ್ ರವರು ತಮ್ಮ ಮನೆಯಿಂದ ಚಾಸಾ–2 ಮುಬಾರಕ್ ರವರ ಶಬ್ಬೀರ್ ನಗರದಲ್ಲಿರುವ ವೆಲ್ಡಿಂಗ್ ಶಾಪಿಗೆ ಕೆಲಸ ಮಾಡಲು ಬರುತ್ತಿದ್ದಾಗ ಆರೋಪಿಯಾದ ನೀವು ಸಾರ್ವಜನಿಕರು ತಿರುಗಾಡುವ ರಸ್ತೆಯಲ್ಲಿ ಲಾರಿ ನಿಲ್ಲಿಸಿಕೊಂಡು ಲಾರಿ ಬಾಡಿಯನ್ನು ಕಟ್ಟುತ್ತಿದ್ದಾಗ ಹಾಗು ರಸ್ತೆಯಲ್ಲಿ ಕಬ್ಬಿಣದ ರಾಡುಗಳನ್ನು ಮತ್ತು ಮರದ ಪೀಸುಗಳನ್ನು ಹಾಕಿಕೊಂಡು ಕೆಲಸ ಮಾಡುತ್ತಿದ್ದಾಗ ಚಾಸಾ–1ರವರು ನಿಮ್ಮ ಬಳಿ ನೀವು ಸಾರ್ವಜನಿಕರು ಮತ್ತು ಮಕ್ಕಳು ತಿರುಗಾಡುವ ರಸ್ತೆಯಲ್ಲಿ ಲಾರಿ ನಿಲ್ಲಿಸಿಕೊಂಡು ಲಾರಿ ಬಾಡಿಯನ್ನು ಕಟ್ಟುತ್ತೀರಿ ಹಾಗು ಕಬ್ಬಿಣದ ರಾಡುಗಳನ್ನು ಮತ್ತು ಮರದ ಪೀಸುಗಳನ್ನು ಹಾಕಿಕೊಂಡು ಕೆಲಸ ಮಾಡುತ್ತೀರಿ ಇದರಿಂದ ನಮಗೆ ತಿರುಗಾಡಲು ತೊಂದರೆ ಆಗುತ್ತಿದೆ ಈ ರೀತಿ ಕೆಲಸ ಮಾಡಬೇಡಿ ಎಂದು ಹೇಳಿದಾಗ ಆರೋಪಿಯಾದ ನೀವು ಚಾಸಾ–1ರವರ ಮೇಲೆ ಕೋಪ ಮಾಡಿಕೊಂಡು ಬೋಳಿಮಗನೇ ಸೂಳೇಮಗನೇ ಎಂದು ಬಾಯಿಗೆ ಬಂದಂತೆ

ಅವಾಚ್ಯಶಬ್ದಗಳಿಂದ ಬೈದು ಸಾರ್ವಜನಿಕ ಶಾಂತಿಗೆ ಭಂಗವನ್ನುಂಟು ಮಾಡಿರುವುದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.352 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಎರಡನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂಧರ್ಭಗಳಂದು ಆರೋಪಿಯಾದ ನೀವು ಚಾಸಾ-1ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಇದನ್ನು ಕೇಳಲು ನೀನ್ಯಾರೂ ಎಂದು ಅವರನ್ನು ಅಡ್ಡಗಟ್ಟಿ ತಡೆದಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.126(2) ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೂರನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂಧರ್ಭಗಳಂದು ಆರೋಪಿಯಾದ ನೀವು ಚಾಸಾ-1ರವರಿಗೆ ಅವಾಚ್ಯ ಶಬ್ದಗಳಿಂದ ಬೈದು, ಅವರನ್ನು ಅಡ್ಡಗಟ್ಟಿ ತಡೆದು ಏಕಾಏಕಿ ಬಲದ ಕೈಯಿಂದ ಅವರ ಎಡಕೆನ್ನೆಗೆ, ಗದ್ದಕ್ಕೆ, ಕಣ್ಣಿಗೆ ಮತ್ತು ಹಲ್ಲಿಗೆ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.115(2) ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂಧರ್ಭಗಳಂದು ಆರೋಪಿಯಾದ ನೀವು ಚಾಸಾ-1ರವರಿಗೆ ಅವಾಚ್ಯ ಶಬ್ದಗಳಿಂದ ಬೈದು, ಅವರನ್ನು ಅಡ್ಡಗಟ್ಟಿ ತಡೆದು ಏಕಾಏಕಿ ಬಲದ ಕೈಯಿಂದ ಅವರ ಎಡಕೆನ್ನೆಗೆ, ಗದ್ದಕ್ಕೆ, ಕಣ್ಣಿಗೆ ಮತ್ತು ಹಲ್ಲಿಗೆ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿ ಕೆಲಸ ಮಾಡಲು ತೊಂದರೆ ಮಾಡಿದರೆ ನಿನ್ನನ್ನು ಕೊಲೆ ಮಾಡದೆ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.351(2) ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಾಣಿಸಿದ ಆರೋಪಣೆಯ ಬಗ್ಗೆ ನಿಮ್ಮನ್ನು ಈ ನ್ಯಾಯಾಲಯದ ಮುಂದೆ ವಿಚಾರಣೆಗೆ ಗುರಿಪಡಿಸುತ್ತೇನೆ ಎಂದು ಈ ಮೂಲಕ ಆಜ್ಞೆ ಮಾಡುತ್ತಿದ್ದೇನೆ.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂ., ಹುಣಸೂರು.**

ANITHA

Digitally signed by ANITHA
Date: 2026.03.24 17:55:38 +0530

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು.**

**ಸಿಸಿ ನಂ.1350/2025**

| | | |
|---|---|---|
| ಆಪಾದಿತನ ಹೆಸರು | : | ಏಜಾಜ್, |
| ತಂದೆಯ ಹೆಸರು | : | ಲೇಟ್ ಅಬ್ದುಲ್ ರಶೀದ್, |
| ವಯಸ್ಸು | : | 65 ವರ್ಷ, |
| ಉದ್ಯೋಗ | : | ಕೂಲಿ |
| ವಾಸಸ್ಥಳ | : | ಶಬ್ಬೀರ್ ನಗರ, ಹುಣಸೂರು ಪಟ್ಟಣ, ಮೈಸೂರು ಜಿಲ್ಲೆ |

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆಯ ಕಲಂ. 263ರ ಅಡಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1 : | ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆ 2 : | ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ? |
| ಉತ್ತರಃ | ತಪ್ಪು ಮಾಡಿಲ್ಲ, ವಿಚಾರಣೆಯಾಗಬೇಕು. |

ಮೇಲ್ಕಾಣಿಸಿದ ಹೇಳಿಕೆಯನ್ನು ದಿನಾಂಕಃ 24.03.2026ರಂದು ನನ್ನ ಉಪಸ್ಥಿತಿಯಲ್ಲಿ ಆರೋಪಿಯಿಂದ ಪಡೆಯಲಾಗಿದ್ದು, ಸದರಿ ಹೇಳಿಕೆಯು ಆರೋಪಿಯು ಕೊಟ್ಟ ನಿಜವಾದ ಹೇಳಿಕೆಯಾಗಿದೆ.

ANITHA Digitally signed by ANITHA Date: 2026.03.24 17:55:44 +0530

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ